13-02-2018
ಮಂಗಳವಾರ
ವಿಶ್ವವಾಣಿ ರಣಕಣ
2018 ಕರ್ನಾಟಕ ಚುನಾವಣೆ



ಐದು ವರ್ಷಗಳಲ್ಲಿ ಕಾಂಗ್ರೆಸ್ ಸರಕಾರ ಯಾವುದೇ ಹಗರಣದಲ್ಲಿ ಭಾಗಿಯಾಗಿಲ್ಲ. ಕರ್ನಾಟಕದ ಜನತೆ ಸಿಎಂ, ಪರಮೇಶ್ವರ್ ಬಗ್ಗೆ ಅಭಿಮಾನ ಇಟ್ಟುಕೊಂಡಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬರುತ್ತದೆ.

**- ರಾಹುಲ್ ಗಾಂಧಿ**
ಎಐಸಿಸಿ ಅಧ್ಯಕ್ಷ



ಮುಂಬರುವ ವಿಧಾನಸಭೆ ಚುನಾವಣೆಯಲ್ಲಿ ರಾಜ್ಯದಲ್ಲಿ ಬಿಜೆಪಿಯು ಮುಖ್ಯಮಂತ್ರಿ ಸಿದ್ದರಾಮಯ್ಯ ಕಾಂಗ್ರೆಸ್ ಮತ್ತು ಎಐಸಿಸಿ ಅಧ್ಯಕ್ಷ ರಾಹುಲ್ ಗಾಂಧಿ ಕಾಂಗ್ರೆಸ್ ಎಂಬ ಎರಡು ಕಾಂಗ್ರೆಸ್ ಅನ್ನು ಏಕಕಾಲದಲ್ಲಿ ಎದುರಿಸಬೇಕಿದೆ. ಕಳೆದ ನಾಲ್ಕೂವರೆ ವರ್ಷದಲ್ಲಿ ಎಲ್ಲೆಲ್ಲಿ ಚುನಾವಣೆ ನಡೆದಿತ್ತೋ ಅಲ್ಲೆಲ್ಲಾ ಕಾಂಗ್ರೆಸ್ ವಿರುದ್ಧ ಬಿಜೆಪಿ ಗೆದ್ದಿದೆ.

**ಮುರಳೀಧರ್ ರಾವ್**
ಬಿಜೆಪಿ ರಾಜ್ಯ ಉಸ್ತುವಾರಿ

@vishwavaninews vishwavanitimely epaper.vishwavani.news vishwavani.news

## ನೇರ ನುಡಿ

### ರೈತರ ಬಗ್ಗೆ ಬಿಎಸ್‌ವೈ ಮಾತನಾಡುವಂತಿಲ್ಲ

**ಬೆಂಗಳೂರು:** ರಾಜ್ಯ ಕಾಂಗ್ರೆಸ್ ಸರಕಾರ ರೈತ ವಿರೋಧಿ ಎಂದು ಸಾರ್ವಜನಿಕ ವೇದಿಕೆಗಳಲ್ಲಿ ಆರೋಪಿಸುತ್ತಿರುವ ಬಿ.ಎಸ್.ಯಡಿಯೂರಪ್ಪನವರಿಗೆ ರೈತರ ಕುರಿತು ಮಾತನಾಡುವ ನೈತಿಕತೆ ಎಲ್ಲಿದೆ ಎಂದು ಗೃಹ ಸಚಿವ ರಾಮಲಿಂಗಾರೆಡ್ಡಿ ಪ್ರಶ್ನಿಸಿದ್ದಾರೆ.

ರೈತರ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದ ಯಡಿಯೂರಪ್ಪ, ಮೂರೇ ದಿನಕ್ಕೆ ಬಿತ್ತನೆ ಬೀಜ, ರಸಗೊಬ್ಬರ ಕೇಳಿದ ರೈತರ ಮೇಲೆ ಗೋಲಿಬಾರ್ ನಡೆಸಿದರು. ನೀವು ಧರಿಸುವ ಹಸಿರು ಶಾಲಿನಲ್ಲಿ ಮೆತ್ತಿರುವ ಹುತಾತ್ಮ ರೈತರ ರಕ್ತದ ಕಲೆ ಮಾಸಿದೆಯೇ ಎಂದು ವಿಮರ್ಶೆ ಮಾಡಿಕೊಳ್ಳಿ ಎಂದರು. ಬಿಜೆಪಿಯ ವಾಟ್ಸ್ ಆಪ್ ಗ್ರೂಪ್‌ನಲ್ಲಿ ರೈತರ ಸಾವಿನ ಕುರಿತು 2 ನಿಮಿಷದ ವಿಡಿಯೋ ಮಾಡಿ ಸರಕಾರದ ವಿರುದ್ಧ ಅಪಪ್ರಚಾರ ನಡೆಸುತ್ತಿದ್ದೀರಿ. ನಮ್ಮ ಸರಕಾರ ಸಹಕಾರಿ ಬ್ಯಾಂಕ್‌ಗಳಲ್ಲಿನ ರೈತರ ಸಾಲ ಮನ್ನಾ ಮಾಡಿದೆ. ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿರುವ ರೈತರ ಸಾಲ ಮನ್ನಾ ಮಾಡಲು ಸಾಧ್ಯವಿಲ್ಲ ಎಂದು ಕೇಂದ್ರ ಸರಕಾರ ಹೇಳಿರುವುದನ್ನು ರಾಜ್ಯದ ರೈತರು ಮರೆತಿಲ್ಲ ಎಂದರು. ಮನಮೋಹನ್ ಸಿಂಗ್ ನೇತೃತ್ವದ ಯುಪಿಎ ಸರಕಾರ ರೈತರ 70 ಸಾವಿರ ಕೋಟಿ ರು. ಸಾಲ ಮನ್ನಾ ಮಾಡಿದೆ.ಆದರೇ ನರೇಂದ್ರ ಮೋದಿ ನೇತೃತ್ವದ ಸರಕಾರ ಅಧಿಕಾರಕ್ಕೆ ಬಂದ ಕೆಲವೇ ದಿನಗಳಲ್ಲಿ ದೇಶದ ಕೆಲವು ಕೈಗಾರಿಕೋದ್ಯಮಿಗಳಿಗೆ 1.30 ಲಕ್ಷ ಕೋಟಿ ರು. ಸಾಲ ಮನ್ನಾ ಮಾಡಿದೆ. ಮೋದಿ ರೈತರ ಸಾಲ ಏಕೆ ಮನ್ನಾ ಮಾಡಿಲ್ಲ ಎಂದು ನೀವೇ ಮೋದಿಯವರನ್ನು ಕೇಳಿ ರಾಜ್ಯದ ರೈತರಿಗೆ ಉತ್ತರಿಸಿ ಎಂದು ಸವಾಲು ಹಾಕಿದ್ದಾರೆ.

## ಸಣ್ ಸುದ್ದಿ

### ನಾಣಯ್ಯ ಶಿಸ್ತುಬದ್ಧ ರಾಜಕಾರಣಿ

**ಮಡಿಕೇರಿ:** ಕರ್ನಾಟಕದ ಅಪರೂಪದ ರಾಜಕಾರಣಿಗಳಲ್ಲಿ ಎಂ.ಸಿ.ನಾಣಯ್ಯ ಅಗ್ರಗಣ್ಯರು. ಯಾವುದೇ ವಿಚಾರದ ಬಗ್ಗೆ ಬೇಕಾದರೂ ಸಮಗ್ರವಾಗಿ, ಸಮರ್ಥವಾಗಿ ಮಾತನಾಡಬಲ್ಲ ಜ್ಞಾನ ನಾಣಯ್ಯ ಅವರಿಗಿದೆ. ದೇಶವನ್ನು ಸಮರ್ಥವಾಗಿ ನಿರ್ಮಿಸುವ, ಜಾತ್ಯಾತೀತ ನಿಲುವಿನ ಮನಸ್ಥಿತಿಯನ್ನು ಹೊಂದಿರುವ ಅಪರೂರದ ರಾಜಕಾರಣಿ ನಾಣಯ್ಯ ಅವರಾಗಿದ್ದಾರೆ. ಇಂಥ ಶಿಸ್ತು ಬದ್ದ ರಾಜಕಾರಣಿ ರಾಜ್ಯದಲ್ಲಿ ಇಂದಿನ ದಿನಗಳಲ್ಲಿ ಕಾಣಸಿಗುವುದು ಅಪರೂಪ ಎಂದು ಹಿರಿಯ ಜಾನಪದ ವಿದ್ವಾಂಸ ಪ್ರೊ.ಕಾಳೇಗೌಡ ನಾಗವಾರ ಹೇಳಿದರು.

### ದೇವೇಗೌಡರು ಮತ್ತೆ ತಪ್ಪು ಮಾಡಲಿ !

**ಬೆಂಗಳೂರು:** ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಸಿದ್ದರಾಮಯ್ಯ ಅವರನ್ನು ಬೆಳೆಸಿ ತಪ್ಪು ಮಾಡಿದ್ದರಿಂದಲೇ ರಾಜ್ಯ ಭ್ರಷ್ಟಾಚಾರ ರಹಿತ ಆಡಳಿತ ನೋಡುವುದಕ್ಕೆ ಸಾಧ್ಯವಾಗಿದ್ದು, ನೀವು ಇಂಥ ತಪ್ಪುಗಳನ್ನು ಮತ್ತೆ ಮತ್ತೆ ಮಾಡುತ್ತಿರಿ ಎಂದು ರಾಜ್ಯ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಡಾ.ಬಿ.ಎಸ್.ಶಿವಣ್ಣ ಹೇಳಿದ್ದಾರೆ.

ಪತ್ರಿಕಾ ಹೇಳಿಕೆ ನೀಡಿರುವ ಅವರು, ಎರಡು ಕ್ಷೇತ್ರದಲ್ಲಿ ಚುನಾವಣೆಗೆ ಸ್ಪರ್ಧಿಸಿ ಸೋತ್ತಿದ್ದ ನಿಮಗೆ ರಾಜಕೀಯ ಮರುಜನ್ಮ ನೀಡಿದ್ದು ಇದೇ ಸಿದ್ದರಾಮಯ್ಯ ಹಾಗೂ ಆರ್.ಎಲ್.ಜಾಲಪ್ಪ ಎಂಬುದನ್ನು ಮರೆಯಬೇಡಿ ಎಂದು ತಿಳಿಸಿದ್ದಾರೆ.

ಸಿದ್ದರಾಮಯ್ಯ ಆಡಳಿತದಲ್ಲಿ ರಾಜ್ಯ ಅಭಿವೃದ್ಧಿಯಲ್ಲಿ ದೇಶದಲ್ಲೆ ಮೊದಲ ಸ್ಥಾನದಲ್ಲಿದೆ. ಬಂಡವಾಳ ಆಕರ್ಷಣೆಯಲ್ಲಿ ಮೊದಲ ಸ್ಥಾನದಲ್ಲಿದೆ. ಅನ್ನಭಾಗ್ಯ ಯೋಜನೆಯಿಂದ ಕೋಟ್ಯಂತರ ಜನರು ಹಸಿವು ಮುಕ್ತರಾಗುವುದಕ್ಕೆ, ಪರಿಶಿಷ್ಟ ಜಾತಿ ಮತ್ತು ಪಂಗಡದ ಜನರು ಋಣ ಮುಕ್ತರಾಗುವುದಕ್ಕೆ ಸಾಧ್ಯವಾಗಿದೆ. ವಿದ್ಯಾಸಿರಿಯಂಥ ಯೋಜನೆ ನೀಡುವುದಕ್ಕೆ ಸಾಧ್ಯವಾಗಿದೆ. ಹೀಗಾಗಿ ಜೀವನದಲ್ಲಿ ನೀವು ಇಂಥ ತಪ್ಪನ್ನು ಮತ್ತೆ ಮತ್ತೆ ಮಾಡಿ ಹೇಳಿದ್ದಾರೆ. ಸಮಾಜದ ಎಲ್ಲ ವರ್ಗದವರಿಗೂ ಅಧಿಕಾರ ಸಿಗಬೇಕೆಂದು ನೀವು ಬಾಯಿ ಮಾತಿನಲ್ಲಿ ಮಾತ್ರ ಹೇಳುತ್ತಿರಿ. ವಾಸ್ತವದಲ್ಲಿ ಅಧಿಕಾರ ನಿಮ್ಮ ಕುಟುಂಬ ವರ್ಗದ ಸುತ್ತಲೇ ತಿರುಗುತ್ತಿರ ಬೇಕೆಂದು ಬಯಸುತ್ತಿರಿ ಎಂದರು.

### ಶಾ ಅಣತಿಯಂತೆ ಪ್ರತಾಪ ಕಾರ್ಯ

**ಮಡಿಕೇರಿ:** ಸಂಸದ ಪ್ರತಾಪ ಸಿಂಹ ಕೇವಲ ಕೋಮು ಗಲಭೆಯಂತಹ ಪ್ರಕರಣಗಳಿಗಷ್ಟೆ ಸೀಮಿತವಾಗುತ್ತಿದ್ದು, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಅಮಿತ್ ಶಾ ಅವರ ಆದೇಶದಂತೆ ನಡೆದುಕೊಳ್ಳುತ್ತಿದ್ದಾರೆ ಎಂದು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಶಿವು ಮಾದಪ್ಪ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ರಾಜ್ಯ ಸರಕಾರ ಇಲ್ಲಿಯವರೆಗೆ ಕೊಡಗು ಜಿಲ್ಲೆಗೆ 2 ಸಾವಿರ ಕೋಟಿ ರು.ಗೂ ಅಧಿಕ ಅನುದಾನ ನೀಡಿದೆ. ಜಿಲ್ಲೆಗೆ ಸಂಸದರ ಕೊಡುಗೆ ಏನು ಎನ್ನುವುದನ್ನು ಮೊದಲು ಬಹಿರಂಗ ಪಡಿಸಲಿ ಎಂದರು.

ದೇಶವನ್ನು ಕಾಂಗ್ರೆಸ್ ಎಪ್ಪತ್ತು ವರ್ಷಗಳ ಕಾಲ ಪ್ರಗತಿ ಪಥದಲ್ಲಿ ಕೊಂಡೊಯ್ದ ಫಲವಾಗಿ ಇಂದು ಚಹಾ ಮಾರುತ್ತಿದ್ದ ವ್ಯಕ್ತಿಯೊಬ್ಬರು ಪ್ರಧಾನಿಯಾಗಲು ಸಾಧ್ಯವಾಗಿದೆ. ಬಿಜೆಪಿ ನೇತೃತ್ವದ ಕೇಂದ್ರ ಸರಕಾರದ ದುರಾಡಳಿತದಿಂದ ದೇಶ ಮತ್ತೆ ಹಿಂದಕ್ಕೆ ಸಾಗಿದೆ ಎಂದರು.

### ಜನ ಜೆಡಿಎಸ್‌ಗೆ ಆಶೀರ್ವದಿಸಲಿ

**ತೀರ್ಥಹಳ್ಳಿ:** ರಾಷ್ಟ್ರೀಯ ಪಕ್ಷಗಳು ರಾಜ್ಯದ ಸಮಸ್ಯೆಗಳ ಬಗ್ಗೆ ಮಾತ ನಾಡುತ್ತಿಲ್ಲ. ಜೆಡಿಎಸ್‌ಗೆ ರಾಜ್ಯದ ಜನ ಆಶೀ ರ್ವಾದ ಮಾಡಿದಲ್ಲಿ ಸಮಸ್ಯೆಗಳನ್ನು ಬಗೆಹರಿಸುವುದಾಗಿ ಜೆಡಿಎಸ್ ರಾಜ್ಯಾಧ್ಯಕ್ಷ ಎಚ್.ಡಿ.ಕುಮಾರಸ್ವಾಮಿ ಹೇಳಿದರು.

ಮಾಧ್ಯಮಗಳ ಜೊತೆ ಮಾತನಾಡಿ, ಬಿಜೆಪಿ ಮತ್ತು ಕಾಂಗ್ರೆಸ್ ರಾಷ್ಟ್ರೀಯ ಪಕ್ಷಗಳಾಗಿದ್ದು, ಸಮಸ್ಯೆಗಳ ಪರಿಹಾರಕ್ಕೆ ಪ್ರಯತ್ನ ನಡೆಸುತ್ತಿಲ್ಲ. ಬಿಜೆಪಿ ನಾಯಕರು ಕೊಳಗೇರಿಯಲ್ಲಿ ವಾಸ್ತವ್ಯ ಹೂಡುವುದಾಗಿ ಹೇಳಿ ಎರಡು ಅಂತಸ್ತಿನ ಮನೆಯಲ್ಲಿ ಮಲಗಿ ಎದ್ದು ಬಂದಿದ್ದಾರೆ. ಅದು ಕೊಳಗೇರಿ ವಾಸ್ತವ್ಯವೇ ಎಂದು ಪ್ರಶ್ನಿಸಿದರು. ರಾಜ್ಯದಲ್ಲಿ ಅನೇಕ ಸಮಸ್ಯೆಗಳಿದ್ದರೂ ಬಿಜೆಪಿ ಅವುಗಳ ಬಗ್ಗೆ ಮಾತನಾಡುತ್ತಿಲ್ಲ. ಚುನಾವಣೆ ಹತ್ತಿರ ಬರುತ್ತಿರುವುದರಿಂದ ಬಿಜೆಪಿ ನಾಯಕರು ಸ್ಲಂಗಳ ಬಗ್ಗೆ ಮಾತನಾಡುತ್ತಿದ್ದಾರೆ ಎಂದರು.

ಬಿಜೆಪಿಗೆ ಪ್ರತಿಷ್ಠೆ, ಹೆಚ್ಚುವರಿ ಸ್ಥಾನ ಗೆಲ್ಲಲು ಕಾಂಗ್ರೆಸ್ ತಂತ್ರ | ಸ್ಟಾರ್ ಪ್ರಚಾರಕರನ್ನು ಬಳಸಿಕೊಂಡು ಸ್ಥಾನ ಉಳಿಸಿಕೊಳ್ಳಲು ಸಿದ್ಧತೆ

# ಮೂರು ಪಕ್ಷಗಳ ಚಿತ್ತ ರಾಜಧಾನಿಯತ್ತ

**ರಂಜಿತ್ ಎಚ್ ಅಶ್ವತ್ಥ,** ಬೆಂಗಳೂರು

ವಿಧಾನಸಭಾ ಚುನಾವಣೆಯಲ್ಲಿ ರಾಜಧಾನಿಯನ್ನು ಉಳಿಸಿಕೊಳ್ಳುವುದು ಮೂರು ಪ್ರಮುಖ ಪಕ್ಷಗಳಿಗೆ ಪ್ರತಿಷ್ಠೆಯಾಗಿದ್ದು, ಕಳೆದ ಬಾರಿಯಂತೆ ಹೆಚ್ಚು ಸ್ಥಾನಗಳಿಸಬೇಕೆಂಬ ಲೆಕ್ಕಾಚಾರದಲ್ಲಿ ಬಿಜೆಪಿ ಇದ್ದರೆ, ಸರಕಾರದ ಸಾಧನೆಯನ್ನು ಊರುಗೋಲಾಗಿಟ್ಟುಕೊಂಡು ಕಾಂಗ್ರೆಸ್ ತನ್ನ ಪ್ರಾಬ್ಯಲ ಹೆಚ್ಚಿಸಿಕೊಳ್ಳಲು ಸಿದ್ಧತೆಯಲ್ಲಿದೆ. ಈ ಎರಡು ರಾಷ್ಟ್ರೀಯ ಪಕ್ಷಗಳ ಮಧ್ಯೆ ಜೆಡಿಎಸ್ ಖಾತೆ ಉಳಿಸಿಕೊಳ್ಳಲು ಸಜ್ಜಾಗುತ್ತಿದೆ.

ಚುನಾವಣೆಯಲ್ಲಿ ಬಹುಮತ ಸಾಧಿಸಿ, ಅಧಿಕಾರದ ಗದ್ದುಗೆ ಹಿಡಿಯಲು ಬೆಂಗಳೂರಿನ 28 ಕ್ಷೇತ್ರಗಳು ಪ್ರಮುಖ ಪಾತ್ರ ನಿರ್ವಹಿಸಲಿದ್ದು, ಹೆಚ್ಚು ಸ್ಥಾನ ಗೆಲ್ಲುವುದಕ್ಕೆ ಅಗತ್ಯ ತಂತ್ರಗಾರಿಕೆಯನ್ನು ಮೂರು ಪಕ್ಷಗಳು ಮಾಡಿಕೊಂಡಿವೆ.

ಕಳೆದ ಚುನಾವಣೆಗಿಂತ ಈ ಬಾರಿ ಅಖಾಡ ಮತ್ತಷ್ಟು ರಂಗೇರಿದ್ದು, ಮೂರು ಪಕ್ಷಗಳು ರಾಜಧಾನಿಯಲ್ಲಿ ಭದ್ರ ನೆಲೆ ಕಂಡುಕೊಳ್ಳಲು ಹೋರಾಟ ಆರಂಭಿಸಿವೆ. ಚುನಾವಣೆಯಲ್ಲಿ ಈ ಬಾರಿ ಬೆಂಗಳೂರಿಗೆ ಸರಕಾರ ನೀಡಿರುವ ಯೋಜನೆಗಳನ್ನು ತೋರಿಸಿ, ಮತ ಪಡೆಯುವ ತಂತ್ರದಲ್ಲಿ ಕಾಂಗ್ರೆಸ್ ಇದ್ದರೆ, ರಾಜಧಾನಿಯಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ. ಐಟಿ ಮಂದಿಯ ಟ್ರಾಫಿಕ್ ಕಿರಿ ಕಿರಿ ತಪ್ಪಿಸಲು ಸರಕಾರ ವಿಫಲವಾಗಿದೆ ಎನ್ನುವ ಮಾತನ್ನು ಹೇಳಿ, ಮತ ಪಡೆಯಬೇಕೆಂಬ ಯೋಜನೆಯನ್ನು ಬಿಜೆಪಿ ಹಾಕಿಕೊಂಡಿದೆ.

**ಬಿಜೆಪಿಗೆ ಪ್ರತಿಷ್ಠೆ:** 28 ಕ್ಷೇತ್ರಗಳ ಪೈಕಿ 12 ಕ್ಷೇತ್ರದಲ್ಲಿ ಕಳೆದ ಬಾರಿ ಗೆಲುವು ಸಾಧಿಸಿದ್ದ ಬಿಜೆಪಿಗೆ ಇದು ಪ್ರತಿಷ್ಠೆಯ ಚುನಾವಣೆಯಾಗಿದೆ. ಈ ಬಾರಿ ಬೆಂಗಳೂರು ನಗರ ಭಾಗದಲ್ಲಿ ಮತ್ತಷ್ಟು ಸೀಟುಗಳನ್ನು ಗೆದ್ದರೆ ಮಾತ್ರ ಸರಕಾರ ರಚಿಸಲು ಸುಲಭವಾಗಲಿದೆ ಎನ್ನುವ ಲೆಕ್ಕಚಾರದಲ್ಲಿ ರಾಜ್ಯ ನಾಯಕರಿದ್ದಾರೆ.

ಇದರೊಂದಿಗೆ ಬೆಂಗಳೂರಿನಿಂದ ಆಯ್ಕೆಯಾಗಿರುವ ಮೂವರು ಸಂಸದರ ಪೈಕಿ ಅನಂತಕುಮಾರ್ ಹಾಗೂ ಸದಾನಂದಗೌಡರು ಕೇಂದ್ರ ಸಚಿವರಾಗಿರುವುದರಿಂದ, ಈ ಭಾಗದ ವಿಧಾನಸಭಾ ಕ್ಷೇತ್ರಗಳನ್ನು ಗೆಲ್ಲಿಸಿಕೊಳ್ಳುವ ಒತ್ತಡದಲ್ಲಿ ಅವರಿದ್ದಾರೆ. ಒಂದು ವೇಳೆ ಕೇಂದ್ರ ಸಚಿವರ ವ್ಯಾಪ್ತಿಯಲ್ಲಿ ಬಿಜೆಪಿಗೆ ಸೋಲಾದರೆ, ಪಕ್ಷದ ವಲಯದಲ್ಲಿ ವೈಯಕ್ತಿಕ ವರ್ಚಸ್ಸಿಗೆ ಹಿನ್ನಡೆಯಾಗುವ ಸಾಧ್ಯತೆಯಿದೆ.

ಕೇಂದ್ರ ಬಜೆಟ್‌ನಲ್ಲಿ ರಾಜಧಾನಿಗೆ ನೀಡಿರುವ ಸಬ್ ಅರ್ಬನ್ ಯೋಜನೆ ಸೇರಿದಂತೆ ವಿವಿಧ ಯೋಜನೆಗಳ ಬಗ್ಗೆ ಜನರಿಗೆ ತಿಳಿಸುವ ಮೂಲಕ ಮತ ಭೇಟೆಗೆ ಬಿಜೆಪಿ ನಾಯಕರು ಮುಂದಾಗಿದ್ದಾರೆ.

**ಬರುವುದೆಲ್ಲ ಲಾಭ:** ಇನ್ನು ಕಳೆದ ಬಾರಿ 13 ಸೀಟು ಗೆಲ್ಲುವಲ್ಲಿ ಯಶಸ್ವಿಯಾಗಿದ್ದ ಕಾಂಗ್ರೆಸ್ ಈ ಬಾರಿ ಇದಕ್ಕೆ ನಾಲ್ಕೈದು ಸ್ಥಾನ ಸೇರಿಸಿಕೊಳ್ಳಬೇಕೆಂಬ ಲೆಕ್ಕಚಾರದಲ್ಲಿ ಕಾರ್ಯನಿರ್ವಹಿಸುತ್ತಿದೆ. ಸಚಿವ ಸಂಪುಟದ ಎರಡನೇ ಪ್ರಮುಖ ಖಾತೆಯನ್ನು ಹೊಂದಿರುವ ಗೃಹ ಸಚಿವ ರಾಮಲಿಂಗಾರೆಡ್ಡಿ, ಸಿಎಂ ಆಪ್ತ ಕೆ.ಜೆ ಜಾರ್ಜ್, ಕೃಷಿ ಸಚಿವ ಕೃಷ್ಣಬೈರೇಗೌಡ ಸೇರಿದಂತೆ ಅನೇಕ ಪ್ರಮುಖ ನಾಯಕರು ಈ ಬಾರಿ ಮತ್ತೊಮ್ಮೆ ತಮ್ಮ ಅದೃಷ್ಟ ಪರೀಕ್ಷೆಗೆ ಸಜ್ಜಾಗಿದ್ದಾರೆ. ಇವರೊಂದಿಗೆ ಜೆಡಿಎಸ್‌ನಿಂದ ಬಂದಿರುವ ಜಮೀರ್ ಅಹಮದ್, ಅಖಂಡ ಶ್ರೀನಿವಾಸಮೂರ್ತಿ ಅವರು ಸ್ಪರ್ಧಿಸಿ ಗೆಲುವು ಸಾಧಿಸುವಲ್ಲಿ ಯಶಸ್ವಿಯಾದರೆ, ಪಕ್ಷಕ್ಕೆ ಲಾಭವಾಗುವುದರಲ್ಲಿ ಅನುಮಾನವಿಲ್ಲವೆಂಬ ಮಾತು ಪಕ್ಷದಲ್ಲಿ ಕೇಳಿಬರುತ್ತಿದೆ.

ಕಳೆದ ಐದು ವರ್ಷದಲ್ಲಿ ರಾಜಧಾನಿಯ ಅಭಿವೃದ್ಧಿಗೆ ನೀಡಿರುವ ಯೋಜನೆಗಳು, ಅನುದಾನ, ಮೆಟ್ರೋ ಮೊದಲ ಹಂತ ಪೂರ್ಣಗೊಳಿಸಿದ ಹೆಗ್ಗಳಿಕೆ, ಹೂಡಿಕೆದಾರರನ್ನು ಹೆಚ್ಚು ಆಕರ್ಷಿಸಿರುವ ನಗರವನ್ನಾಗಿ ಮಾಡುವಲ್ಲಿ ಸರಕಾರದ ಶ್ರಮವನ್ನು ಐಟಿ ಮಂದಿಗೆ ತಿಳಿಸಲು ಕಾಂಗ್ರೆಸ್ ತಯಾರಿ ನಡೆಸಿದೆ. ಒಂದು ವೇಳೆ ಇದು ಸಾಧ್ಯವಾದರೆ, ಕಳೆದ ಬಾರಿಗಿಂತ ಈ ಬಾರಿ ಹೆಚ್ಚು ಸ್ಥಾನ ಗೆಲ್ಲುವ ಸಾಧ್ಯತೆ ಹೆಚ್ಚಿದೆ.

**ಖಾತೆ ಉಳಿಸಿಕೊಳ್ಳಲು ಹೆಣಗಾಡುತ್ತಿರುವ ಜೆಡಿಎಸ್:** 2013ರ ವಿಧಾನಸಭಾ ಚುನಾವಣೆಯಲ್ಲಿ ಜೆಡಿಎಸ್ ಬೆಂಗಳೂರು ನಗರದ ಮೂರು ಕ್ಷೇತ್ರಗಳನ್ನು ಗೆಲ್ಲುವಲ್ಲಿ ಯಶಸ್ವಿಯಾಗಿತ್ತು. ಗೋಪಾಲಯ್ಯ ಅವರು ಮಹಾಲಕ್ಷ್ಮೀ ಲೇಔಟ್‌ನಿಂದ, ಪುಲಕೇಶಿನಗರದಿಂದ ಅಖಂಡ ಶ್ರೀನಿವಾಸ ಮೂರ್ತಿ ಹಾಗೂ ಚಾಮರಾಜಪೇಟೆಯಿಂದ ಜಮೀರ್ ಅಹಮದ್ ಗೆದ್ದಿದರು. ಈ ಬಾರಿ ಜಮೀರ್ ಅಹಮದ್ ಹಾಗೂ ಅಖಂಡ ಶ್ರೀನಿವಾಸ ಮೂರ್ತಿ ಕಾಂಗ್ರೆಸ್‌ನತ್ತ ಹೊರಳಿದ್ದು, ರಾಜಧಾನಿಯಲ್ಲಿ ಜೆಡಿಎಸ್ ಒಂದು ಸ್ಥಾನಕ್ಕೆ ಇಳಿಯುವ ಭೀತಿಯಲ್ಲಿದೆ.

ಈ ಚುನಾವಣೆಯಲ್ಲಿ ಮೂರು ಸ್ಥಾನ ಉಳಿಸಿಕೊಂಡು ಪಕ್ಷಕ್ಕೆ ಯಾರು ಅನಿವಾರ್ಯವಲ್ಲ ಎನ್ನುವ ಸಂದೇಶ ನೀಡಬೇಕೆಂಬ ನಿಟ್ಟಿನಲ್ಲಿ ಜೆಡಿಎಸ್ ನಾಯಕರು ಶ್ರಮಿಸುತ್ತಿದ್ದಾರೆ. ಇದರೊಂದಿಗೆ ಒಕ್ಕಲಿಗ ಸಮುದಾಯ ಹೆಚ್ಚಿರುವ ಪದ್ಮನಾಭನಗರ ಹಾಗೂ ಆರ್‌ಆರ್ ನಗರವನ್ನು ತನ್ನ ತೆಕ್ಕೆ ಹಾಕಿಕೊಳ್ಳಬೇಕೆಂಬ ತಂತ್ರಗಾರಿಕೆಯಲ್ಲಿಯೂ ಜೆಡಿಎಸ್ ನಿರತವಾಗಿದೆ.

### ತಂತ್ರಜ್ಞಾನದ ಮೊರೆ

**ಬೆಂಗಳೂರಿನಲ್ಲಿರುವ ಸುಶಿಕ್ಷತ ಮಂದಿಯನ್ನು ಓಲೈಸಲು ಮೂರು ಪಕ್ಷಗಳು ತಂತ್ರಜ್ಞಾನ ಹಾಗೂ ಸಾಮಾಜಿಕ ಜಾಲತಾಣಗಳ ಮೊರೆ ಹೋಗುವುದು ಬಹುತೇಕ ನಿಶ್ಚಿತವಾಗಿದೆ. ಈಗಾಗಲೇ ಮೂರು ಪಕ್ಷಗಳು, ತಮ್ಮ ಕಾಲದಲ್ಲಿ ರಾಜಧಾನಿಗೆ ನೀಡಿದೆ ಕೊಡುಗೆಗಳ ಬಗ್ಗೆ ಸಾಲು ಸಾಲು ಪೋಸ್ಟ್‌ಗಳನ್ನು ಹಾಕುವ ಮೂಲಕ ಐಟಿ ವರ್ಗದ ಮಂದಿಯನ್ನು ಸೆಳೆಯಲು ಮುಂದಾಗಿದೆ. ಇದರೊಂದಿಗೆ ಯುವ ಮತದಾರರನ್ನು ಸೆಳೆಯಲು ಸ್ಟಾರ್ ಐಕಾನ್‌ಗಳನ್ನು ಪ್ರಚಾರಕ್ಕೆ ಬಳಸಿಕೊಳ್ಳಲು ಮೂರು ಪಕ್ಷಗಳು ಸಿದ್ಧತೆ ನಡೆಸಿದೆ.**

## ಸ್ವರಾಜ್ ಇಂಡಿಯಾದಿಂದ 15 ಕ್ಷೇತ್ರಗಳಲ್ಲಿ ಸ್ಪರ್ಧೆ

**ವಿಶ್ವವಾಣಿ ಸುದ್ದಿಮನೆ** ಮೈಸೂರು

ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಸ್ವರಾಜ್ ಇಂಡಿಯಾದಿಂದ 5ರಿಂದ 15 ಕ್ಷೇತ್ರದಲ್ಲಿ ಮಾತ್ರ ಅಭ್ಯರ್ಥಿಗಳನ್ನು ಕಣಕ್ಕಿಳಿಸಲು ತೀರ್ಮಾನಿಸಲಾಗಿದೆ ಎಂದು ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಬಡಗಲಪುರ ನಾಗೇಂದ್ರ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಬಿಜೆಪಿ, ಕಾಂಗ್ರೆಸ್ ಮತ್ತು ಜೆಡಿಎಸ್ ಹೊರತುಪಡಿಸಿ ಉಳಿದ ಪಕ್ಷಗಳೊಡನೆ ಹೊಂದಾಣಿಕೆ ಮಾಡಿಕೊಳ್ಳಲು ಜನಾಂದೋಲನ ಮಹಾಮೈತ್ರಿ ವೇದಿಕೆಯ ಸಿದ್ಧತೆ ನಡೆಯುತ್ತಿದೆ. ಇದರಲ್ಲಿ ಸ್ವರಾಜ್ ಇಂಡಿಯಾವು ಸೇರಿದೆ ಎಂದು ಹೇಳಿದರು.

ಕನಿಷ್ಠ 57 ಕ್ಷೇತ್ರಗಳಲ್ಲಿ ಸ್ಪರ್ಧಿಸಬೇಕು ಎಂಬ ಉದ್ದೇಶವಿತ್ತಾದರೂ, ಹೆಚ್ಚು ಕ್ಷೇತ್ರಗಳಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸುವ ಬದಲು ಗೆಲ್ಲಬಹುದಾದ ಕ್ಷೇತ್ರದಲ್ಲಿ ಮಾತ್ರ ಅಭ್ಯರ್ಥಿಗಳನ್ನು ಕಣಕ್ಕಿಳಿಸಿ ಹೆಚ್ಚು ಶ್ರಮ ಹಾಕೋಣ ಎಂಬ ಉದ್ದೇಶದಿಂದ ಈ ತೀರ್ಮಾನ ಕೈಗೊಳ್ಳಲಾಗಿದೆ ಎಂದರು.

ಫೆ. 27ಕ್ಕೆ ಬೆಂಗಳೂರಿನಲ್ಲಿ ಸ್ವರಾಜ್ ಇಂಡಿಯಾದ ರಾಜ್ಯದ ಕೇಂದ್ರ ಕಚೇರಿ ಉದ್ಘಾಟನೆಗೆ ಯೋಗೇಂದ್ರ ಯಾದವ್ ಆಗಮಿಸಲಿದ್ದು, ಅಂದು ವಿಧಾನಸಭಾ ಚುನಾವಣೆಯ ಅಭ್ಯರ್ಥಿಗಳ ಮೊದಲ ಪಟ್ಟಿ ಬಿಡುಗಡೆಗೊಳಿಸಲಾಗುವುದು. ಮುಂದಿನ ಜಿಪಂ ಮತ್ತು ತಾಪಂ ಚುನಾವಣೆಯಲ್ಲಿ ಎಲ್ಲ ಕ್ಷೇತ್ರದಲ್ಲಿಯೂ ಅಭ್ಯರ್ಥಿಗಳನ್ನು ಕಣಕ್ಕಿಳಿಸಲಾಗುವುದು ಎಂದು ವಿವರಿಸಿದರು.

ಈ ಬಾರಿ ಸ್ಪರ್ಧಿಸಲು ಉದ್ದೇಶಿಸಿರುವ ಕ್ಷೇತ್ರಗಳಲ್ಲಿ ಕೆ.ಆರ್. ನಗರ, ವರುಣಾ, ಚಾಮುಂಡೇಶ್ವರಿ, ನಂಜನಗೂಡು ಸೇರಿದೆ ಎಂದು ತಿಳಿಸಿದರು.

ರೈತ ಸಂಘದಲ್ಲಿ ಹಲವು ಬದಲಾವಣೆ: ಮಾ. 1 ರಂದು ಪ್ರೊ. ಎಂ.ಡಿ. ನಂಜುಂಡಸ್ವಾಮಿ ಅವರ ನೆನಪು ಕಾರ್ಯಕ್ರಮವನ್ನು ನಗರದ ಕಲಾಮಂದಿರದಲ್ಲಿ ಆಯೋಜಿಸಲಾಗುತ್ತಿದೆ. ಈ ಸಂದರ್ಭದಲ್ಲಿ ಸಂಘಕ್ಕೆ ಸಂಬಂಧಿಸಿದಂತೆ ಹಲವು ಬದಲಾವಣೆ ನಡೆಯಲಿದೆ ಎಂದರು. ಸಂಘದ ಹೆಸರಿನಲ್ಲಿ ಮಾರ್ಪಾಡು, ಚಿಹ್ನೆ, ಬಾವುಟ, ನೀತಿ ಮತ್ತು ಸಮವಸ್ತ್ರದಲ್ಲಿಯೂ ಬದಲಾವಣೆ ಆಗಲಿದೆ ಎಂದು ತಿಳಿಸಿದರು.

## ಜೆಡಿಎಸ್‌ಗೆ ಉತ್ತಮ ಬೆಂಬಲ: ರವೀಶ್

**ವಿಶ್ವವಾಣಿ ಸುದ್ದಿಮನೆ** ಚಳ್ಳಕೆರೆ



ಚಳ್ಳಕೆರೆ ವಿಧಾನಸಭೆ ಕ್ಷೇತ್ರದಲ್ಲಿ ಜೆಡಿಎಸ್‌ಗೆ ಉತ್ತಮ ಬೆಂಬಲ ವ್ಯಕ್ತವಾಗುತಿದೆ. ಪಕ್ಷವನ್ನು ಬಲಿಷ್ಠವಾಗಿ ಸಂಘಟಿಸಿ ಚುನಾವಣೆಯಲ್ಲಿ ಗೆಲುವು ಸಾಧಿಸುತ್ತೇವೆ ಎಂದು ಜೆಡಿಎಸ್ ಮುಖಂಡ ಎಂ. ರವೀಶ್ ಕುಮಾರ್ ಹೇಳಿದರು.

ತಾಲೂಕಿನ ಹುಲಿಕುಂಟೆ, ಸಾಣಿಕೆರೆ, ಕಾಪರಹಳ್ಳಿ, ಬೆಳಗೆರೆ ಗ್ರಾಮಗಳಲ್ಲಿ ನಡೆದ ಪ್ರಚಾರ ಸಭೆಯಲ್ಲಿ ಮಾತನಾಡಿದರು.

ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ನೇತೃತ್ವದಲ್ಲಿ ಪಕ್ಷ ಬಲಿಷ್ಠವಾಗುತ್ತಿದೆ. ರಾಜ್ಯದ ಎಲ್ಲ ಕ್ಷೇತ್ರಗಳಲ್ಲೂ ಬಲಿಷ್ಠ ಅಭ್ಯರ್ಥಿಗಳನ್ನು ನಿಲ್ಲಿಸಿ, ರಾಜ್ಯದಲ್ಲಿ ಅಧಿಕಾರ ಹಿಡಿಯಲು ತಂತ್ರ ರೂಪಿಸಲಾಗುತ್ತಿದೆ. ಮೈಸೂರು, ಮಂಡ್ಯ, ಹಾಸನ, ಬೆಂಗಳೂರು, ಚಿತ್ರದುರ್ಗ, ತುಮಕೂರು ಸೇರಿದಂತೆ ದಕ್ಷಿಣ, ಉತ್ತರ ಕರ್ನಾಟಕ ಮತ್ತು ಮಲೆನಾಡು ಭಾಗಗಳಲ್ಲಿ ಪಕ್ಷಕ್ಕೆ ಉತ್ತಮ ಬೆಂಬಲ ವ್ಯಕ್ತವಾಗುತ್ತಿದೆ ಎಂದು ಹೇಳಿದರು.

ರಾಜ್ಯದಲ್ಲಿ ರೈತರ ಬವಣೆ ಹೇಳತೀರದಾಗಿದೆ. ಜೆಡಿಎಸ್ ಅಧಿಕಾರಕ್ಕೆ ಬಂದರೆ ರೈತರ ಸಮಸ್ಯೆ ನಿವಾರಿಸಲು ವಿಶೇಷ ಯೋಜನೆ ರೂಪಿಸಲಾಗುತ್ತದೆ. ವೃದ್ದರಿಗೆ, ನಿರುದ್ಯೋಗಿ ಯುವಕರಿಗೆ ಅನುಕೂಲ ಕಲ್ಪಿಸಲಾಗುತ್ತದೆ. ರಾಜ್ಯದಲ್ಲಿ ಕುಂಟುತ್ತಾ ಸಾಗಿರುವ ನೀರಾವರಿ ಯೋಜನೆಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಶ್ರಮವಹಿಸಲಿದ್ದಾರೆ ಎಂದರು.

ರಾಷ್ಟ್ರೀಯ ಅಧ್ಯಕ್ಷ ಎಚ್.ಡಿ.ದೇವೇಗೌಡ ರಾಜ್ಯದ ಹಲವು ಜಿಲ್ಲೆಗಳಲ್ಲಿ ಚುನಾವಣಾ ಪ್ರಚಾರ ಕೈಗೊಳ್ಳಲಿದ್ದಾರೆ. ಈ ಹಿಂದೆ ತಾಲೂಕಿನಲ್ಲಿ ನಡೆದ ಜಿಪಂ ಚುನಾವಣೆ ವೇಳೆ ಪಕ್ಷವನ್ನು ಸಂಘಟಿಸುವ ಮೂಲಕ ತಾಲೂಕಿನಲ್ಲಿ ಪಕ್ಷವನ್ನು ಬಲಪಡಿಸಿದ್ದಾರೆ ಎಂದರು. ತಾಲೂಕಿನಾದ್ಯಂತ ಯುವಕರು, ಹಿರಿಯರು ಮತ್ತು ಮಹಿಳೆಯರು ಸೇರಿದಂತೆ ಹಲವರು ಪಕ್ಷಕ್ಕೆ ಸೇರ್ಪಡೆಯಾಗುತ್ತಿದ್ದಾರೆ. ವಿಧಾನಸಭೆ ಕ್ಷೇತ್ರದ ನಗರ ಮತ್ತು ಗ್ರಾಮೀಣ ಭಾಗಗಳ ಎಲ್ಲ ಬೂತ್‌ಗಳಿಗೆ ಭೇಟಿ ನೀಡಿ ಸ್ಥಳೀಯ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಪಕ್ಷ ಕೆಲಸ ಮಾಡಲಿದೆ. ಮತದಾರರು ಜೆಡಿಎಸ್‌ಗೆ ಬೆಂಬಲ ನೀಡಿ ರಾಜ್ಯದಲ್ಲಿ ರೈತರ ಸರಕಾರವನ್ನು ಅಧಿಕಾರಕ್ಕೆ ತರಬೇಕಿದೆ ಎಂದು ಮನವಿ ಮಾಡಿದರು. ಜಿಪಂ ಸದಸ್ಯ ಟಿ.ಮುತ್ತುರಾಜ್ ಇದ್ದರು.

## ದೇವೇಗೌಡರ ಹೇಳಿಕೆ ಘನತೆಗೆ ತಕ್ಕುದಲ್ಲ

**ವಿಶ್ವವಾಣಿ ಸುದ್ದಿಮನೆ** ಶ್ರವಣಬೆಳಗೊಳ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕುರಿತು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರು ನೀಡಿರುವ ಹೇಳಿಕೆ ಅವರಿಗೆ ಶೋಭೆ ತರುವುದಿಲ್ಲ. ಗೌಡರ ಹೇಳಿಕೆ ರಾಜ್ಯದ ಜನರಿಗೆ ಮಾಡಿದ ಅವಮಾನ ಎಂದು ಪಶುಸಂಗೋಪನಾ ಸಚಿವ ಎ.ಮಂಜು ಹೇಳಿದರು.

ಚನ್ನರಾಯಪಟ್ಟಣ ತಾಲೂಕಿನಲ್ಲಿ ಮಹಾಮಸ್ತಕಾಭಿಷೇಕದ ಅಂಗವಾಗಿ ಜನಿವಾರದ ಕೆರೆಯಲ್ಲಿ ನಿರ್ಮಿಸಲಾಗಿರುವ ಬೋಟಿಂಗ್ ವ್ಯವಸ್ಥೆ ಉದ್ಘಾಟಿಸಿ ಮಾತನಾಡಿ, ದೇವೇಗೌಡರು ಸಿದ್ದರಾಮಯ್ಯ ಅವರನ್ನು ಬೆಳೆಸಿದ್ದಾರೆ ಎಂದು ಹೇಳಿಕೆ ನೀಡಿದ್ದಾರೆ. ವಾಸ್ತವದಲ್ಲಿ ಸಿಎಂ ಸಿದ್ದರಾಮಯ್ಯ ಅವರನ್ನು ದೇವೇಗೌಡರು ಬೆಳೆಸಿಲ್ಲ. ಬದಲಿಗೆ ಬಳಸಿಕೊಂಡಿದ್ದಾರೆ ಎಂದು ಆರೋಪಿಸಿದರು.

> **ಗೌಡರ ಹೇಳಿಕೆ ಅವರ ವಯಸ್ಸಿಗೆ, ಅವರ ಘನತೆಗೆ ಹಾಗೂ ಸ್ಥಾನ ಮಾನಕ್ಕೆ ಶೋಭೆ ತರುವುದಿಲ್ಲ. ನಾನು ದೇವೇಗೌಡರನ್ನು ಕ್ಷಮೆಯಾಚಿಸಿ ಎಂದು ಹೇಳುವುದಿಲ್ಲ. ಆದರೆ ಹಾಗೇನಾದರೂ ಅವರು ವಿಷಾದ ವ್ಯಕ್ತಪಡಿಸಿದರೆ ಈ ರಾಜ್ಯದ ಜನರಿಗೆ ಅವರು ನೀಡುವ ಗೌರವ ಎಂದು ಭಾವಿಸುತ್ತೇನೆ.**
> **- ಎ.ಮಂಜು,** ಪಶುಸಂಗೋಪನಾ ಸಚಿವ

**ಅಷ್ಟೂ ಗೊತ್ತಿಲ್ಲವೇ?:** ಮಾಜಿ ಪ್ರಧಾನಿ ದೇವೇಗೌಡರಿಗೆ ಶ್ರವಣಬೆಳಗೊಳದಲ್ಲಿ ಮಾತನಾಡಲು ನೀಡದೆ ಅವಮಾನಿಸಲಾಗಿದೆ ಎಂಬ ಆರೋಪಕ್ಕೆ ಉತ್ತರಿಸಿದ ಸಚಿವ ಎ.ಮಂಜು, ದೇವೇಗೌಡರು ಮಾಜಿ ಪ್ರಧಾನಿ. ಅವರಿಗೆ ರಾಷ್ಟ್ರಪತಿಗಳ ಪ್ರೋಟೋಕಾಲ್ ಎಲ್ಲಿ ತಯಾರಿಸಲಾಗುತ್ತದೆ ಎಂಬುದು ಗೊತ್ತಿರುತ್ತದೆ. ಒಂದು ವೇಳೆ ಗೊತ್ತಿಲ್ಲವೆಂದಾದರೆ ಅದಕ್ಕೆ ನಾನು ತಪ್ಪಿತಸ್ಥನಲ್ಲ ಎಂದರು.

**ನನ್ನಲ್ಲಿ ಸಣ್ಣತನವಿಲ್ಲ:** ಮಾಜಿ ಸಚಿವ ರೇವಣ್ಣ ನನ್ನ ವಿರುದ್ಧ ಹಕ್ಕು ಚ್ಯುತಿ ಮಂಡಿಸಿದ್ದಾರೆ. ಇದು ತಮ್ಮ ಗಮನಕ್ಕೆ ಬಂದಿದೆ. ನಾನು ರಾಷ್ಟ್ರಪತಿಗಳ ಸಮಾರಂಭದಲ್ಲಿ ಸ್ವಾಗತ ಭಾಷಣ ಮಾಡಲು ಮುಂದಾದ ವೇಳೆ ವೇದಿಕೆಯಲ್ಲಿ ಆಸೀನರಾಗಿದ್ದವರ ಹೆಸರುಗಳೆಲ್ಲವನ್ನು ಹೇಳಿದೆ. ನನ್ನ ಭಾಷಣದ ಸಂದರ್ಭದಲ್ಲಿ ರೇವಣ್ಣ ಅಲ್ಲಿ ಇರಲಿಲ್ಲ. ಒಂದು ವೇಳೆ ಆತ ಅಲ್ಲಿದ್ದಿದ್ದರೆ ಅವರ ಹೆಸರು ಹೇಳದಷ್ಟು ಸಣ್ಣತನ ನನ್ನಲ್ಲಿಲ್ಲ ಎಂದು ಉತ್ತರಿಸಿದರು. ಧರ್ಮಸಿಂಗ್ ಮುಖ್ಯಮಂತ್ರಿಯಾಗಿದ್ದ ವೇಳೆ ಅಂದು ಸಚಿವರಾಗಿದ್ದ ಬಿ.ಶಿವರಾಂ ಅವರನ್ನು ಇದೇ ಮುಖಂಡರು ಹೇಗೆ ನಡೆಸಿಕೊಂಡರು. ಎಷ್ಟು ಶಿಷ್ಟಾಚಾರ ಪಾಲನೆ ಮಾಡಿದ್ದಾರೆ ಎಂದು ನನಗೆ ಗೊತ್ತಿದೆ ಎಂದು ಛೇಡಿಸಿದರು.



ಬೋಟಿಂಗ್ ವ್ಯವಸ್ಥೆಯನ್ನು ಸಚಿಎ.ಮಂಜು ಉದ್ಘಾಟಿಸಿದರು. ಇತರ ಗಣ್ಯರು ಇದ್ದರು.

### ಜೆಡಿಎಸ್‌ಗೆ ಆಸರೆಯಾಗಿ ನಿಂತವರು ಸಿದ್ದರಾಮಯ್ಯ

**ದೇವೇಗೌಡರು ಅನೇಕ ನಾಯಕರನ್ನು ಅವರ ಅನುಕೂಲಕ್ಕೆ ತಕ್ಕಂತೆ ಬಳಸಿಕೊಂಡಿದ್ದಾರೆ. ಅವರು ಯಾರನ್ನೂ ಬೆಳಸಲಿಲ್ಲ, ಬೆಳೆಯುವುದನ್ನೂ ಸಹಿಸಲಿಲ್ಲ. ದೇವೇಗೌಡರು ರಾಜಕಾರಣದಲ್ಲಿ ಸೋಲನುಭವಿಸಿ ಮನೆಯಲ್ಲಿದ್ದಾಗ ಅವರಿಗೆ ಆಸರೆಯಾಗಿ ನಿಂತವರು ಇದೇ ಸಿದ್ದರಾಮಯ್ಯ, ಬೊಮ್ಮಾಯಿ. ರಾಚಯ್ಯ. ಅವರಿಲ್ಲದಿದ್ದರೆ ಇಂದು ಜೆಡಿಎಸ್ ಬದುಕಿರುತ್ತಿರಲಿಲ್ಲ ಎಂದು ಸಚಿವ ಎ.ಮಂಜು ಟಾಂಗ್ ನೀಡಿದರು.**

## ಬೂತ್‌ಮಟ್ಟದಿಂದಲೇ ಬಿಜೆಪಿ ಭದ್ರಗೊಳಿಸುವ ಕಾರ್ಯ ಸಾಗಿದೆ

# ಮಿಷನ್ 150 ತಲುಪುವುದೇ ನಮ್ಮ ಗುರಿ

**ಸಂದರ್ಶನ**

**ರತ್ನಾ ಎಸ್.ಗೌಡ**

ವಿಧಾನಸಭಾ ಚುನಾವಣೆ ತಯಾರಿ ಚುರುಕಾಗಿ ನಡೆಯುತ್ತಿದೆ. ಬಿಜೆಪಿಯು ಕಳೆದ ಒಂದು ವರ್ಷದಿಂದಲೇ ತಯಾರಿ ಪ್ರಾರಂಭಿಸಿದೆ. ಯಾವುದೇ ಒಂದು ಪಕ್ಷ ಬಲಿಷ್ಠವಾಗಬೇಕಿದ್ದರೆ ಅದು ಬೂತ್‌ಮಟ್ಟದಿಂದ ಮಾತ್ರ ಸಾಧ್ಯ. ಹೀಗಾಗಿ ಬಿಜೆಪಿಯನ್ನು ಸಹ ಬೂತ್ ಮಟ್ಟದಿಂದಲೇ ಭದ್ರಗೊಳಿಸುವ ಕೆಲಸ ಮಾಡಲಾಗುತ್ತಿದೆ ಎಂದು ಹಿರಿಯ ನಾಯಕ ಗೋವಿಂದ ಕಾರಜೋಳ ವಿಶ್ವವಾಣಿಗೆ ನೀಡಿದ ಸಂದರ್ಶನದಲ್ಲಿ ಹೇಳಿದ್ದಾರೆ.

**● ಚುನಾವಣಾ ತಯಾರಿ ಹೇಗೆ ಸಾಗಿದೆ?**

ಈಗಾಗಲೇ ಫೆಬ್ರವರಿ ಮಧ್ಯಭಾಗದಲ್ಲಿದ್ದೇವೆ. ಇನ್ನು ಕೆಲವೇ ತಿಂಗಳಲ್ಲಿ ಚುನಾವಣೆ ಬರಲಿದೆ. ಚುನಾವಣೆ ಬಂದಾಗ ಮಾತ್ರ ಜನಗಳ ಹತ್ತಿರ ಹೋಗುವುದು ಬಿಜೆಪಿಯ ಗುಣವಲ್ಲ. ಬಿಜೆಪಿ ಒಂದು ವರ್ಷದಿಂದಲೇ ಚುನಾವಣಾ ತಯಾರಿ ನಡೆಸಿದೆ. ಜನರ ಸಮಸ್ಯೆಯನ್ನು ಮೊದಲಿನಿಂದ ಆಲಿಸುತ್ತ ಬರುವ ಕೆಲಸ ಮಾಡಿದ್ದೇವೆ. ರಾಜ್ಯಾಧ್ಯಕ್ಷ ಬಿ.ಎಸ್. ಯಡಿಯೂರಪ್ಪ ಅವರ ನೇತೃತ್ವದಲ್ಲಿ ನಡೆದ ನವ ಕರ್ನಾಟಕ ಪರಿವರ್ತನಾ ರ್‍ಯಾಲಿ ಯಶಸ್ವಿಯಾಗಿದೆ. ಅಲ್ಲದೆ, ಆಯಾ ಕ್ಷೇತ್ರಗಳಲ್ಲಿ ನಮ್ಮ ಮುಖಂಡರು ಕಾರ್ಯಕರ್ತರನ್ನು ಬೂಸ್ಟ್ ಮಾಡುವ ಕೆಲಸ ಮಾಡುತ್ತಿದ್ದಾರೆ. ಸಮಾವೇಶ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಈಗಲೂ ಮಾಡುತ್ತಿದ್ದೇವೆ. ನಮ್ಮ ಈ ಚುಟುವಟಿಕೆ ಗಮನಿಸಿರುವ ಜನರಿಗೂ ಸಹ ಬಿಜೆಪಿಯ ಮೇಲೆ ಒಲವು ಮೂಡಿದೆ. ಅದಕ್ಕಿಂತ ಹೆಚ್ಚಾಗಿ ರಾಜ್ಯ ಸರಕಾರದ ಮೇಲೆ ಜನರಿಗೆ ಬೇಸರವಿದ್ದು, ಈ ಸರಕಾರವನ್ನು ತೊಲಗಿಸಬೇಕು ಎಂದು ಪಣತೊಟ್ಟಿದ್ದಾರೆ.



ಗೋವಿಂದ ಕಾರಜೋಳ

**● ಅಮಿತ್ ಶಾ ಅವರು ನೀಡಿದ ಸೂತ್ರದಂತೆ ಚುನಾವಣಾ ಕೆಲಸ ನಡೆಯುತ್ತಿದೆಯಾ?**

ನಮ್ಮ ರಾಷ್ಟ್ರೀಯ ಅಧ್ಯಕ್ಷರು ನೀಡಿರುವ ಸೂತ್ರ ಎಂದಿಗೂ ಸೋಲಲು ಸಾಧ್ಯವಿಲ್ಲ. ಚಾಣಕ್ಯ ಎಂದು ಈಗಾಗಲೇ ಪ್ರಸಿದ್ಧರಾಗಿರುವ ಅವರು ಕರ್ನಾಟಕ ಚುನಾವಣೆಯನ್ನು ಹೇಗೆ ಎದುರಿಸಬೇಕು ಎಂದು ಪಕ್ಕಾ ಯೋಜನೆ ಹಾಕಿಕೊಂಡಿದ್ದಾರೆ. ಅದಕ್ಕಿಂತ ಹೆಚ್ಚಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಅಭಿವೃದ್ಧಿ ಕೆಲಸ ಮಾಡಿದ್ದಾರೆ. ನಮ್ಮ ರಾಷ್ಟ್ರದೊಂದಿಗೆ ಮುಂದುವರೆದ ರಾಷ್ಟ್ರಗಳು ಸ್ನೇಹದ ಹಸ್ತ ಚಾಚಿವೆ. ಇದಕ್ಕೆಲ್ಲಾ ಮೋದಿ ಅವರ ಶ್ರಮವೇ ಕಾರಣ. ಜನರಿಗೂ ಮೋದಿ ಅವರ ಮೇಲೆ ಅಪಾರ ಪ್ರೀತಿ, ಅಭಿಮಾನವಿದೆ. ರಾಜ್ಯದಲ್ಲೂ ಬಿಜೆಪಿ ಸರಕಾರ ಬಂದರೆ ಕೇಂದ್ರದಿಂದ ಸುಲಭವಾಗಿ ಅನುದಾನ ತರಲು ಸಾಧ್ಯವಾಗುತ್ತದೆ.

**● ಬಿಜೆಪಿಯವರು ಸ್ಲಂ ರಾಜಕೀಯ ಮಾಡುತ್ತಿದ್ದಾರೆ ಎಂದು ಕಾಂಗ್ರೆಸಿಗರು ಆರೋಪಿಸುತ್ತಿದ್ದಾರಲ್ಲ?**

ಸ್ಲಂ ರಾಜಕೀಯ ಮಾಡುತ್ತಿರುವುದು ಬಹುಶಃ ಕಾಂಗ್ರೆಸ್‌ನವರೇ ಇರಬೇಕು. ಏಕೆಂದರೆ ಕಳೆದ ನಾಲ್ಕುಮುಕ್ಕಾಲು ವರ್ಷದಿಂದ ಆಳ್ವಿಕೆ ನಡೆಸುತ್ತಿರುವ ಕಾಂಗ್ರೆಸ್ ಸರಕಾರ ಸ್ಲಂ ಜನರಿಗೆ ಸಣ್ಣ ಅನುಕೂಲವನ್ನೂ ಮಾಡಿಕೊಟ್ಟಿಲ್ಲ. ಈಗಲೂ ಸ್ಲಂ ನಿವಾಸಿಗಳು ಮೂಲ ಸೌಕರ್ಯವಿಲ್ಲದೇ ಬಳಲುತ್ತಿದ್ದಾರೆ. ಕುಡಿಯುವ ನೀರು, ವಿದ್ಯುತ್, ರಸ್ತೆ, ಮಕ್ಕಳಿಗೆ ಶಿಕ್ಷಣ, ಪೌಷ್ಟಿಕ ಆಹಾರ ಕೂಡ ಸ್ಲಂ ನಿವಾಸಿಗಳಿಗೆ ಸಿಗುತ್ತಿಲ್ಲ. ಇವರು ಸ್ವಂತ ಮನೆ ನಿರ್ಮಾಣ ಮಾಡಿಕೊಳ್ಳಲು ಸಾಧ್ಯವಾಗಿಲ್ಲ. ನಾವು ಅವರ ಕಷ್ಟ ಆಲಿಸುವ ಉದ್ದೇಶದಿಂದ ಕೊಳಗೇರಿ ಪ್ರದೇಶಗಳಲ್ಲಿ ವಾಸ್ತವ್ಯ ಹೂಡಿದ್ದೇವೆಯೇ ಹೊರತು ರಾಜಕಾರಣ ಮಾಡಲು ಅಲ್ಲ. ಈ ಸರಕಾರ ಕೊಳಗೇರಿ ನಿವಾಸಿಗಳಿಗೆ ಯಾವ ಸೌಲಭ್ಯವೂ ನೀಡುವುದಿಲ್ಲ ಎಂಬುದು ನಮಗೂ ಗೊತ್ತಿದೆ. ಅದಕ್ಕಾಗಿ ನಾವುಗಳೇ ಕೊಳಗೇರಿ ಪ್ರದೇಶಗಳಿಗೆ ಭೇಟಿ ನೀಡಿ ಅಲ್ಲಿನ ಸಮಸ್ಯೆಗಳ ಸರ್ವೆ ಮಾಡಿಸಿ, ವರದಿ ಸಿದ್ಧಪಡಿಸಿದ್ದೇವೆ. ಮುಂದಿನ ಚುನಾವಣೆಯಲ್ಲಿ ನಮ್ಮ ಸರಕಾರ ಅಸ್ತಿತ್ವಕ್ಕೆ ಬಂದ ಕೂಡಲೇ ಅವರಿಗೆಲ್ಲ ಮೂಲಸೌಕರ್ಯ ನೀಡುವ ಕೆಲಸ ಮಾಡಲಾಗುತ್ತದೆ. ನಮ್ಮ ಚುನಾವಣಾ ಪ್ರಣಾಳಿಕೆಯಲ್ಲೂ ಈ ವಿಷಯ ಸೇರಿಸುವ ಚಿಂತನೆ ಇದೆ.

**● ಬಿಜೆಪಿಯ ಗುರಿಯಂತೆ ಮಿಷನ್ 150 ತಲುಪಲಿದ್ದೀರಾ?**

ಬಿಜೆಪಿಯ ಗುರಿಯೇ ಮಿಷನ್ 150. ನಮ್ಮ ಅಧ್ಯಕ್ಷರು 150 ಟಾರ್ಗೆಟ್ ನೀಡಿದ್ದಾರೆ. ಅಷ್ಟು ಕ್ಷೇತ್ರಗಳನ್ನು ಗೆಲ್ಲುವ ಮಾರ್ಗವನ್ನೂ ತೋರಿಸಿಕೊಟ್ಟಿದ್ದಾರೆ. ಅದರಂತೆ ನಾವು ನಡೆದುಕೊಳ್ಳುತ್ತಿದ್ದೇವೆ. ಈಗಾಗಲೇ ಇಡೀ ರಾಜ್ಯದ ಜನರನ್ನು ನಾವು ತಲುಪಿಯಾಗಿದೆ. ಈಗ ಮತ್ತೆ ಮನೆ ಮನೆಗೂ ಹೋಗುವ, ಮತ್ತೆ ರಾಜ್ಯದ ಜನರನ್ನು ಭೇಟಿ ಮಾಡುವ ಕೆಲಸ ಮಾಡುತ್ತಲೇ ಇರುತ್ತೇವೆ. ಮಿಷನ್ 150ರ ಗುರಿ ತಲುಪುವ ಮೂಲಕ ನಮ್ಮ ಸರಕಾರವನ್ನು ಸ್ವತಂತ್ರವಾಗಿ ಅಧಿಕಾರಕ್ಕೆ ತರಲಿದ್ದೇವೆ.

**● ಬಿಜೆಪಿ ಹಿಂದೂ ಅಜೆಂಡಾ ಮೇಲೆ ಚುನಾವಣೆ ಎದುರಿಸುತ್ತಿದೆ ಎಂಬ ಮಾತಿದೆಯಲ್ಲ?**

ನಾವು ಹಿಂದೂಗಳು. ಅದೇ ಅಜೆಂಡಾ ಇಟ್ಟುಕೊಂಡು ಚುನಾವಣೆಗೆ ಹೋಗಬೇಕಿಲ್ಲ. ನಮ್ಮ ಅಜೆಂಡಾ ಏನಿದ್ದರು ಅಭಿವೃದ್ಧಿ ಅಷ್ಟೆ. ಅಭಿವೃದ್ಧಿಯಲ್ಲಿ ಎಲ್ಲ ಧರ್ಮಗಳು ಬರಲಿವೆ. ಕಾಂಗ್ರೆಸ್‌ಗೆ ಬಿಜೆಪಿಯನ್ನು ತೆಗಳುವುದು ಬಿಟ್ಟರೆ ಬೇರೆ ಕೆಲಸವಿಲ್ಲ. ನಮ್ಮ ವಿರುದ್ಧ ಟೀಕೆ ಮಾಡಲು ಅವರಿಗೆ ಯಾವ ವಿಷಯವೂ ಸಿಗುತ್ತಿಲ್ಲ. ಅದಕ್ಕಾಗಿ ಬೇಕಾದ್ದು ಮಾತನಾಡುತ್ತಿದ್ದಾರೆ. ಅವರಿಗೆ ಇರುವುದು ಕೆಲವೇ ತಿಂಗಳು. ಅವರು ಮಾತನಾಡಿಕೊಳ್ಳಲಿ. ನಂತರ ನಮ್ಮ ಪಕ್ಷ ಅಧಿಕಾರಕ್ಕೆ ಬಂದು ಮಾತನಾಡಲಿದೆ.